# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬಾದಾಮಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಸಂಬಂಧ.

ಓದಲಾಗಿದೆ: (1) ಸರ್ಕಾರದ ಆದೇಶ ಸಂಖ್ಯೆ: ನಅಇ 439 ಬೆಮಪ್ರಾ 2006 ದಿನಾಂಕ: 17.01.2007.

(2) ಬಾದಾಮಿ ನಗರ ಯೋಜನಾ ಪ್ರಾಧಿಕಾರದ ಪತ್ರ ಸಂಖ್ಯೆ: ನಯೋಪ್ರಾಬ/ಮಹಾಯೋಜನೆ/2008-009/155 ದಿನಾಂಕ: 20.03.2009.

(3) ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿಯ ಏಕ ಕಡತ ಸಂಖ್ಯೆ: ನಯೋ(6)/ಉನಿ1/ಮ.ಯೋ/ಅಂತಿಮ/2009 ರಲ್ಲಿ ನೀಡಿರುವ ಅಭಿಪ್ರಾಯ ದಿನಾಂಕ: 21.08.2009.

ಕ್ರಮ ಸಂಖ್ಯೆ: 489
ದಿನಾಂಕ: 1/12/09

-*-*-

## ಪ್ರಸ್ತಾವನೆ:-

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ಬಾದಾಮಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಬಾದಾಮಿ ನಗರ ಯೋಜನಾ ಪ್ರಾಧಿಕಾರವು ಬಾದಾಮಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾಯೋಜನೆಯ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(1) ರನ್ವಯ ಅಗತ್ಯ ಕ್ರಮ ಜರುಗಿಸಿ ಮಹಾಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3)ರ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಏಕ ಕಡತದಲ್ಲಿ ಬಾದಾಮಿ ಪಟ್ಟಣದ ಜನಸಂಖ್ಯೆಯು 2021ರಲ್ಲಿ 42,500 ಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ, ಮಹಾ ಯೋಜನೆಯನ್ನು ತಯಾರಿಸಲಾಗಿದೆ. ಬಾದಾಮಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ 1591 ಹೆಕ್ಟೇರ್ ಪ್ರದೇಶದಲ್ಲಿ ಪ್ರತಿ ಹೆಕ್ಟೇರಿಗೆ 82 ಜನಸಾಂದ್ರತೆಯಂತೆ ಪರಿಗಣಿಸಿ, 521.12 ಹೆಕ್ಟೇರ್ ಪ್ರದೇಶವನ್ನು ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 12ರಲ್ಲಿನ ಅಂಶಗಳನ್ನು ಪರಿಗಣಿಸಿ, ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಳಿಗಾಗಿ ಪ್ರಸ್ತಾಪಿಸಿರುವ 521.12 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 244.38 ಹೆಕ್ಟೇರ್ (ಶೇ.47.63), ವಾಣಿಜ್ಯಕ್ಕಾಗಿ 66.34 ಹೆಕ್ಟೇರ್ (ಶೇ.12.92), ಕೈಗಾರಿಕೆಗಾಗಿ 31.82 ಹೆಕ್ಟೇರ್ (ಶೇ.6.20), ಸಾರ್ವಜನಿಕ / ಅರೆ ಸಾರ್ವಜನಿಕ ಉಪಯೋಗಕ್ಕೆ 38.67 ಹೆಕ್ಟೇರ್ (ಶೇ.7.54), ಉದ್ಯಾನವನ / ಬಯಲು

ಜಾಗೆಗಳಿಗೆ 26.13 ಹೆಕ್ಟೇರ್ (ಶೇ.12.27), ನಾಗರೀಕ ಸೌಲಭ್ಯಕ್ಕೆ 1.45 ಹೆಕ್ಟೇರ್ (ಶೇ.0.28), ಸಾರಿಗೆ/ಸಂಪರ್ಕ ವಲಯಕ್ಕೆ 104.33 ಹೆಕ್ಟೇರ್ (ಶೇ.20.34) ಪ್ರದೇಶವನ್ನು ನಿಗಧಿಪಡಿಸಲಾಗಿದೆ. ಮಹಾಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 154 ಗುಅಪ್ರಾ 2009,**
**ಬೆಂಗಳೂರು, ದಿನಾಂಕ: 23–11–2009**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬಾದಾಮಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆಯನ್ನು ನೀಡಲಾಗಿದೆ. ಮಹಾಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿ.ಟಿ.ನಾರಾಯಣಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಮುಂದಿನ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು ಹಾಗೂ ಸದರಿ ಪ್ರಕಟಿತ 100 ಪ್ರತಿಗಳನ್ನು